# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಯಚೂರು ಜಿಲ್ಲಾ ಪಂಚಾಯತ್‌ನಲ್ಲಿ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಾಮಗಾರಿಗಳನ್ನು ಅಳವಡಿಸದೇ ಅನುದಾನವನ್ನು ದುರುಪಯೋಗಪಡಿಸಿಕೊಂಡಿರುವ ಕುರಿತು ಸಲ್ಲಿಸಿರುವ ದೂರಿನ ಬಗ್ಗೆ ತನಿಖೆ ಮಾಡಿ ವರದಿ ಸಲ್ಲಿಸುವ ಬಗ್ಗೆ.

**ಓದಲಾಗಿದೆ:-** ಶ್ರೀ ಟಿ.ಹೇಮಂತ ವರ್ಮ, ರಾಜ್ಯ ಸಂಘಟನಾ ಕಾರ್ಯದರ್ಶಿ, ರಾಷ್ಟ್ರೀಯ ದಲಿತ ಸೇವೆ (ರಿ), ರಾಜ್ಯ ಸಮಿತಿ, ಬೆಂಗಳೂರು ಇವರು ಸಲ್ಲಿಸಿರುವ ದೂರು ದಿನಾಂಕ 15.7.2015

****

**ಪ್ರಸ್ತಾವನೆ:**

ಶ್ರೀ ಟಿ.ಹೇಮಂತ ವರ್ಮ, ರಾಜ್ಯ ಸಂಘಟನಾ ಕಾರ್ಯದರ್ಶಿ, ರಾಷ್ಟ್ರೀಯ ದಲಿತ ಸೇವೆ (ರಿ), ರಾಜ್ಯ ಸಮಿತಿ, ಬೆಂಗಳೂರು ಇವರು ಮೇಲೆ ಓದಲಾದ ದಿನಾಂಕ 15.7.2015 ರಂದು ಸರ್ಕಾರಕ್ಕೆ ಸಲ್ಲಿಸಿರುವ ದೂರಿನಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆದೇಶಗಳನ್ನು ಉಲ್ಲಂಘಿಸಿ, ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಾಮಗಾರಿಗಳನ್ನು ಅಳವಡಿಸದೇ 2014-15ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2515ರಡಿ ಜಿಲ್ಲಾ ಪಂಚಾಯಿತಿ ಕಛೇರಿ ಕಟ್ಟಡಗಳ ನಿರ್ಮಾಣ ಕಾಮಗಾರಿಗಳಿಗೆ ಸುಮಾರು ರೂ. 90.00 ಲಕ್ಷ ಅನುದಾನವನ್ನು ನೇರವಾಗಿ ಡೂಪ್ಲಿಕೇಟ್ ಕ್ಯಾಷ್ಯೂಟೆಕ್ ಶಕ್ತಿ ನಗರ ಸಂಸ್ಥೆಗೆ ನಿಯಮಬಾಹಿರವಾಗಿ ಬಿಡುಗಡೆ ಮಾಡಿ ದುರುಪಯೋಗಪಡಿಸಿಕೊಂಡಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ ಶಿಸ್ತು ಕ್ರಮ ಜರುಗಿಸಬೇಕೆಂದು ಕೋರಿರುತ್ತಾರೆ.

ಸದರಿ ಮನವಿಯನ್ನು ಪರಿಶೀಲಿಸಲಾಗಿ ದೂರು ಅರ್ಜಿಯಲ್ಲಿ ಗಂಭೀರ ಸ್ವರೂಪದ ಆರ್ಥಿಕ ಅಕ್ರಮಗಳು ನಡೆದಿರುವ ಬಗ್ಗೆ ಪ್ರಸ್ತಾಪಿಸಿರುವುದರಿಂದ ಈ ಬಗ್ಗೆ ತನಿಖೆ ನಡೆಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 201 ವಿಸೇಟಿ 2015, ಬೆಂಗಳೂರು ದಿನಾಂಕ: 27.08.2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಟಿ.ಹೇಮಂತ ವರ್ಮ, ರಾಜ್ಯ ಸಂಘಟನಾ ಕಾರ್ಯದರ್ಶಿ, ರಾಷ್ಟ್ರೀಯ ದಲಿತ ಸೇವೆ (ರಿ), ರಾಜ್ಯ ಸಮಿತಿ, ಬೆಂಗಳೂರು ಇವರು ದಿನಾಂಕ 15.7.2015 ರಂದು ಸಲ್ಲಿಸಿರುವ ದೂರು ಅರ್ಜಿಯಲ್ಲಿನ ಎಲ್ಲಾ ಅಂಶಗಳ ಬಗ್ಗೆ ವಿವರವಾದ ತನಿಖೆ ನಡೆಸಿ ತನಿಖಾ ಸಮಯದಲ್ಲಿ ಕಂಡುಬರುವ ಲೋಪಗಳ ಬಗ್ಗೆ ವಿವರಗಳನ್ನು ಸ್ಪಷ್ಟವಾಗಿ ನಮೂದಿಸಿ, ಅದಕ್ಕೆ ಜವಾಬ್ದಾರರಾದ ಅಧಿಕಾರಿ/ನೌಕರರುಗಳ ಹೆಸರುಗಳನ್ನು ಗುರ್ತಿಸಿ ನಿರ್ದಿಷ್ಟವಾದ ವರದಿಯನ್ನು ಈ ಆದೇಶದ ದಿನಾಂಕದಿಂದ 15 ದಿನಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸಲು ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು ಇವರಿಗೆ ಆದೇಶಿಸಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರು ತನಿಖಾಧಿಕಾರಿಗಳಿಗೆ ಎಲ್ಲಾ ರೀತಿಯ ಸಹಕಾರವನ್ನು ನೀಡುವುದು.

ನಿಯೋಜಿತ ಅಧಿಕಾರಿಗಳು ನಿಯಮಾನುಸಾರ ಲಭ್ಯವಾಗುವ ಭತ್ಯೆಗಳನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ.
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಇವರಿಗೆ,</u>

1) ಮಹಾಲೇಖಪಾಲರು. ಕರ್ನಾಟಕ ಬೆಂಗಳೂರು.
2) ಆಯುಕ್ತರು. ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ. ಬೆಂಗಳೂರು.
(ಶ್ರೀ ಟಿ.ಹೇಮಂತ ವರ್ಮ. ರಾಜ್ಯ ಸಂಘಟನಾ ಕಾರ್ಯದರ್ಶಿ. ರಾಷ್ಟ್ರೀಯ ದಲಿತ ಸೇವೆ (ರಿ). ರಾಜ್ಯ ಸಮಿತಿ. ಬೆಂಗಳೂರು ಇವರು ಸಲ್ಲಿಸಿರುವ ದಿನಾಂಕ 15.7.2015ರ ದೂರಿನ ಪ್ರತಿಯೊಂದಿಗೆ)
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ. ಜಿಲ್ಲಾ ಪಂಚಾಯತ್. ರಾಯಚೂರು.
4) ಶ್ರೀ ಟಿ.ಹೇಮಂತ ವರ್ಮ. ರಾಜ್ಯ ಸಂಘಟನಾ ಕಾರ್ಯದರ್ಶಿ. ರಾಷ್ಟ್ರೀಯ ದಲಿತ ಸೇವೆ (ರಿ). ರಾಜ್ಯ ಸಮಿತಿ. ಬೆಂಗಳೂರು. ಮನೆ ನಂ. 7-6-297/15. ಹಂಸರಾಜ್ ಭವನ. ವಾಸವಿ ನಗರ. ಬಸ್ ನಿಲ್ದಾಣದ ಹತ್ತಿರ. ಕೆ.ಪಿ.ಸಿ.ಎಲ್ ಕ್ವಾಟರ್ಸ್ ಹಿಂಭಾಗ. ~~ರಾಯಚೂರು~~-584103.

<u>ಪ್ರತಿ ಮಾಹಿತಿಗಾಗಿ:</u>

1) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ. ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
2) ಮೇಲ್ವಿಚಾರಕರು. ಗಣಕ ಕೋಶ. ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.